ಅ) ಒಬ್ಬ ನೇಕಾರನು ಬೆಳಗಾವಿ ಜಿಲ್ಲೆಯ ರಾಮದುರ್ಗ ತಾಲ್ಲೂಕಿನ ಮಣಿಹಾಳ ಗ್ರಾಮದಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವುದಾಗಿ ವರದಿ ಮಾಡಿದೆ.

ಆ) ಕೌಟುಂಬಿಕ ಕಾರಣಗಳಿಂದ ಎಂಬುದಾಗಿ ವರದಿಯಾಗಿದೆ.

ಇ) ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದಲ್ಲಿ ಇತ್ತೀಚಿನ ದಿನಗಳಲ್ಲಿ ಹಣಕಾಸಿನ ಮುಗ್ಗಟ್ಟು ಉಂಟಾಗಿ ನೇಕಾರರಿಗೆ ಸುಮಾರು ಎರಡು ತಿಂಗಳಿನಿಂದ ನೂಲು ಪೂರೈಕೆಯಲ್ಲಿ ಸ್ವಲ್ಪ ಅಡಚಣೆಯಾಗಿರುತ್ತದೆ.

ಈ) ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಆರ್ಥಿಕ ಪುನರ್‌ರಚನೆ ಮತ್ತು ಪುನರ್‌ವಸತಿಗೆ ದೀನದಯಾಳ್ ಹತ್‌ಕರ್ಘಾ ಪ್ರೋತ್ಸಾಹನದಡಿ ಆರ್ಥಿಕ ನೆರವು ಪಡೆಯಲು ಕ್ರಮಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿರುವ ಪಶು ಆಸ್ಪತ್ರೆಗಳಲ್ಲಿ ಖಾಲಿ ಇರುವ ಹುದ್ದೆಗಳು

256 (294): ಶ್ರೀ ಪಾಟೀಲ್ ಶಿವಾನಂದ ಸಿದ್ದರಾಮಗೌಡ (ತಿಕೋಟ) ಮಾನ್ಯ ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಪಶು ಆಸ್ಪತ್ರೆ, ಪಶು ಚಿಕಿತ್ಸಾಲಯ, ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರ ಹಾಗೂ ಕೃತಕ ಗರ್ಭಧಾರಣಾ ಉಪ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರು ಹಾಗೂ ಇತರೆ ಹುದ್ದೆಗಳ ವಿವರ ನೀಡುವುದು;

ಆ) ಖಾಲಿ ಇರುವ ಹುದ್ದೆಗಳನ್ನು ಯಾವಾಗ ತುಂಬಲಾಗುವುದು;

ಇ) ಕಟ್ಟಡಗಳು ಇಲ್ಲದ್ದಕ್ಕೆ ಕಟ್ಟಡಗಳನ್ನು ಕಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು;

ಈ) ಮುಂಡರಗಿ ಮತ ಕ್ಷೇತ್ರದಲ್ಲಿ ಸದರಿ ಆಸ್ಪತ್ರೆಯಲ್ಲಿ ಖಾಲಿ ಇರುವ ಹುದ್ದೆಗಳು ಎಷ್ಟು; ಈ ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು?

ಶ್ರೀ ಎಂ. ಮಹಾದೇವ್ (ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು) :

ಅ) ರಾಜ್ಯದಲ್ಲಿರುವ ಪಶು ಆಸ್ಪತ್ರೆ, ಪಶುಚಿಕಿತ್ಸಾಲಯ, ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರ ಹಾಗೂ ಗರ್ಭಧಾರಣಾ ಉಪ ಕೇಂದ್ರಗಳಿಗೆ ವಿವಿಧ ವೃಂದಗಳಲ್ಲಿ ಮಂಜೂರಾಗಿರುವ ಹುದ್ದೆಗಳು ಈ ಕೆಳಕಂಡಂತಿವೆ.

ಕ್ರ.ಸಂ.	ಹುದ್ದೆಯ ವಿವರ	ಮಂಜೂರು	ಭರ್ತಿ	ಖಾಲಿ
1.	ಸಹಾಯಕ ನಿರ್ದೇಶಕರು	294	260	34
2.	ಪಶುವೈದ್ಯಾಧಿಕಾರಿ	1775	949	826*
3.	ಪಶುವೈದ್ಯಕೀಯ ಮೇಲ್ವಿಚಾರಕರು	226	77	149
4.	ಹಿರಿಯ ಪಶುವೈದ್ಯಕೀಯ ಪರೀಕ್ಷಕರು	2084	1753	331
5.	ಪಶುವೈದ್ಯಕೀಯ ಪರೀಕ್ಷಕರು	1487	1279	208
6.	ಪಶುವೈದ್ಯಕೀಯ ಸಹಾಯಕರು	2398	1447	951*
7.	ಡಿ ದರ್ಜೆ ನೌಕರರು	5657	4422	1235

ಆ) ಪಶುವೈದ್ಯಾಧಿಕಾರಿಗಳ 203 ಹುದ್ದೆಗಳನ್ನು ಹಾಗೂ ಪಶುವೈದಕೀಯ್ಯ ಸಹಾಯಕರ 311 ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲಾಗಿದೆ, ಇತ್ತೀಚೆಗೆ ಪಶುವೈದ್ಯಾಧಿಕಾರಿಗಳ

22 ಬ್ಯಾಕ್‌ಲಾಗ್ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ಸರ್ಕಾರವು 250 ಪಶುವೈದ್ಯಾಧಿಕಾರಿಗಳ ವಿಶೇಷ ನೇರ ನೇಮಕಾತಿಗೆ ಅನುಮೋದನೆ ನೀಡಿದೆ, ಈ ಪ್ರಕ್ರಿಯೆಯು ಪ್ರಗತಿಯಲ್ಲಿದೆ. ಪಶುವೈದ್ಯಕೀಯ ಮೇಲ್ವಿಚಾರಕರ ಹಾಗೂ ಹಿರಿಯ ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಬಡ್ತಿ ನೀಡುವ ಮೂಲಕ ಭರ್ತಿ ಮಾಡಲಾಗುತ್ತಿದೆ, ಆರ್ಥಿಕ ಮಿತವ್ಯಯ ಸಡಿಲಗೊಳಿಸಿದ ನಂತರ ಇತರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಇ) ಕಟ್ಟಡ ಕಟ್ಟಲು ಲೋಕಸಭಾ/ರಾಜ್ಯಸಭಾ ಸದಸ್ಯರ ಸ್ಥಳೀಯ ಅಭಿವೃದ್ಧಿ ನಿಧಿಯಿಂದ ಅನುದಾನ ಪಡೆಯಲು ಅಗತ್ಯ ಕ್ರಮವನ್ನು ಕೈಗೊಳ್ಳಲಾಗುತ್ತಿದೆ, ಹಾಗೂ ಕಟ್ಟಡ ಕಾಮಗಾರಿಯನ್ನು ನಬಾರ್ಡ್‌ನ ಸಾಲ ಪಡೆಯುವ ಮೂಲಕ ನಿರ್ಮಾಣ ಮಾಡುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

ಈ) ಹುದ್ದೆಯ ವಿವರ

	ಮಂಜೂರು	ಭರ್ತಿ	ಖಾಲಿ
ಸಹಾಯಕ ನಿರ್ದೇಶಕರು	1	1	–
ಪಶುವೈದ್ಯಾಧಿಕರಿ	12	4	8
ಪಶುವೈದ್ಯಕೀಯ ಮೇಲ್ವಿಚಾರಕರು	1	–	1
ಹಿರಿಯ ಪಶುವೈದ್ಯಕೀಯ ಪರಿವೀಕ್ಷಕರು	12	10	2
ಪಶುವೈದ್ಯಕೀಯ ಸಹಾಯಕರು	15	3	12
ಡಿ ದರ್ಜೆ ನೌಕರರು	32	31	1

250 ಪಶುವೈದ್ಯಾಧಿಕಾರಿಗಳನ್ನು ವಿಶೇಷ ನೇರ ನೇಮಕಾತಿ ಮೂಲಕ ಮೀಸಲಾತಿ ಅರ್ಹತೆ ಮೇರೆಗೆ ಭರ್ತಿ ಮಾಡಲಾಗುತ್ತಿದ್ದು, ಇದರಲ್ಲಿ ಮುಂಡರಗಿ ಕ್ಷೇತ್ರದಲ್ಲಿ ಖಾಲಿ ಇರುವ ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಆದ್ಯತೆ ಮೇಲೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಗದಗ ಜಿಲ್ಲೆ ಮುಳಗುಂದ ಪಟ್ಟಣದಲ್ಲಿರುವ ಮುರಾರ್ಜಿ ದೇಸಾಯಿ ವಸತಿ ಶಾಲೆ

258 (574): ಶ್ರೀ ಪಾಟೀಲ್ ಶಿವಾನಂದ ಸಿದ್ದರಾಮಗೌಡ (ತಿಕೋಟ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗದಗ ಜಿಲ್ಲೆ ಮುಳಗುಂದ ಪಟ್ಟಣದಲ್ಲಿರುವ ಮುರಾರ್ಜಿ ದೇಸಾಯಿ ವಸತಿ ಶಾಲೆಗೆ ಕಟ್ಟಡವಿದೆಯೇ?

ಆ) ಕಟ್ಟಡವಿಲ್ಲದಿದ್ದರೆ, ಕಟ್ಟಲು ಏನು ಕ್ರಮ ಕೈಗೊಳ್ಳಲಾಗಿದೆ: ಹಾಗೂ ಕಟ್ಟಡ ಯಾವಾಗ ಒದಗಿಸುತ್ತೀರಾ?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಇಲ್ಲ.

ಆ) ಗದಗ ಜಿಲ್ಲೆಯಲ್ಲಿನ ಮುಳಗುಂದದಲ್ಲಿ ಮೊರಾರ್ಜಿ ವಸತಿ ಶಾಲೆಯ ನಿರ್ಮಾಣ ಕಾರ್ಯ ಸ್ಥಗಿತಗೊಂಡಿದ್ದ ಕಾರಣ ಜಿಲ್ಲಾಧಿಕಾರಿ, ಗದಗ ಇವರಿಂದ ಮಂಜೂರುಗೊಂಡ ನಿವೇಶನ ಭಾರಿ ಹಳ್ಳದಿಂದ ಕೂಡಿದ್ದು, ಆ ಹಳ್ಳವನ್ನು ಮುಚ್ಚಿಸಲು ಸಾಕಷ್ಟು ಬಂಡವಾಳವನ್ನು ಹಾಕಿ ಸೂಕ್ತ ನಿರ್ಮಾಣ ಮಾಡಬೇಕಾಗುತ್ತದೆ. ಅಲ್ಲದೇ ಈ ಕಾಮಗಾರಿ ನಿರ್ಮಾಣ ಕಾರ್ಯವನ್ನು ಈಗಾಗಲೇ ರೂ. 185.37 ಲಕ್ಷಗಳ ವೆಚ್ಚದಲ್ಲಿ ನಿರ್ಮಿಸಲು ಎನ್.ಪಿ.ಸಿ.ಸಿ. ಇವರಿಗೆ ನೀಡಲಾಗಿದೆ.